ಹಿರಿಯ ಸಿವಿಲ್ ಜಡ್ಜ್‌ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ
ಚನ್ನಪಟ್ಟಣ.

ಸಿ.ಸಿ. ಸಂಖ್ಯೆ 226/2016

ಚಾಸಾಃ 5 ಫ್ರಾಸಾಃ5

| | | |
|---|---|---|
| ಹೆಸರು | : | ರೂಪೇಶ್ |
| ಗಂಡನ/ತಂದೆಯ ಹೆಸರು | : | ಶ್ರೀನಿವಾಸ್ |
| ವಯಸ್ಸು | : | 25 ವರ್ಷ |
| ಉದ್ಯೋಗ | : | ವಿದ್ಯಾರ್ಥಿ |
| ವಾಸ | : | ಸುಂಕದಕಟ್ಟೆ |

ದಿನಾಂಕ 06.01.2024 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ

ಸಾಕ್ಷಿಗೆ ಈಗ ತೋರಿಸುತ್ತಿರುವ ಒಂದು ದಾಖಲೆಯಲ್ಲಿರುವ ಅಂದರೆ ಮಹಜರ್ ನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರ ಮಹಜರಿಗೆ ಸಹಿಯನ್ನು ನಮ್ಮ ಮನೆಯ ಪಕ್ಕ ಗಲಾಟೆಯ ವಿಚಾರಕ್ಕೆ ಸಂಬಂದಪಟ್ಟಂತೆ ಸಹಿಯನ್ನು ಹಾಕಿರುತ್ತೇನೆ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಿಪಿ-2 ರಲ್ಲಿರುವ ಸಂಗತಿಗಳು ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ಮು ಮಾ 1 ಅನ್ನು ನೋಡಿ ಅದನ್ನು ಜಗಳ ಆಗುವಾಗ ನಮ್ಮ ಮನೆಯಲ್ಲಿ ನೋಡಿರುತ್ತೇನೆಂದು ನುಡಿಯುತ್ತಾರೆ. ನ್ಯಾಯಾಲಯದಲ್ಲಿರುವ 1 ನೇ ಆರೋಪಿ ಗೊತ್ತು.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).

<u>ಪಾಟೀ ಸವಾಲುಃ ಎಪಿಪಿಯವರಿಂದಃ</u>

ದಿನಾಂಕ 08.01.2016 ರಂದು ನಿಪಿ-2 ರ ಮಹಜರ್ ಅನ್ನು ಜರುಗಿಸಿರುತ್ತಾರೆಂದರೆ ಸರಿ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>

ಪೋಲಿಸರು ಘಟನಾ ಸ್ಥಳಕ್ಕೆ ಬರುವಂತೆ ನನಗೆ ನೋಟೀಸ್ ಅನ್ನು ನೀಡಿರುತ್ತಾರೆ. ಪೋಲಿಸರು ಆ ರೀತಿ ಯಾವುದೇ ರೀತಿ ನೋಟೀಸ್ ಅನ್ನು ನೀಡಿರಲಿಲ್ಲ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಹೋಗಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಅಮಾನತ್ತು ಪಡಿಸಿಕೊಂಡಿಲ್ಲ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಮಹಜರಿನಲ್ಲಿ ಬರೆದಿರುವ ಸಂಗತಿಗಳು ನನಗೆ ಗೊತ್ತಿದೆ. ಮಹಜರಿನಲ್ಲಿರುವ ಸಂಗತಿಗಳು ನನಗೆ ಗೊತ್ತಿಲ್ಲದೇ ಇದ್ದರೂ ನಾನು ಗೊತ್ತಿದೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಮು ಮಾ 1 ರವಂತಹ ಕುಡ್ಲುಗಳು ಸಾಮಾನ್ಯವಾಗಿ ಹಳ್ಳಿಗಳಲ್ಲಿ ಸಿಗುತ್ತವೆ ಎಂದರೆ ಸರಿ. ಪೋಲಿಸರು ನನ್ನ ಸಮಕ್ಷಮ ಮು ಮಾ 1 ನ್ನು ಅಮಾನತ್ತು ಪಡಿಸಿಕೊಂಡಿಲ್ಲ ನಾನು ಪಿರ್ಯಾದಿದಾರರಿಗೆ ಸಹಾಯವಾಗಲೀ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

2.ನಮ್ಮ ಮನೆಗೂ ಘಟನಾ ಸ್ಥಳ ಅಕ್ಕ ಪಕ್ಕದಲ್ಲಿದೆ. ಘಟನಾ ಸ್ಥಳ ಒಂಟಿ ಮನೆಯಾಗಿದ್ದು ಅಲ್ಲಿ ಬೇರೆ ಮನೆಗಳು ಇಲ್ಲ. ಪಿರ್ಯಾದಿದಾರರು ನನಗೆ ಸಂಬಂದಿಕರು ಎಂದರೆ ಹೌದು. ಅದರಿಂದ ನಾನು ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಾನು ಘಟನಾ ಸ್ಥಳಕ್ಕೆ ಹೋಗದಾಗ ಮಧ್ಯಾಹ್ನ 12.00 ಗಂಟೆಯಾಗಿತ್ತು. ಮಹಜರಿಗೆ ನನ್ನ ಜೊತೆ ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ನನಗೆ ಘಟನಾ ಸ್ಥಳದ ಚೆಕ್ಕು ಬಂದಿ ನಿಖರವಾಗಿ ಗೊತ್ತಿಲ್ಲ. ನಾನು ಮಹಜರಿಗೆ ಘಟನಾ ಸ್ಥಳದಲ್ಲಿ ಸಹಿ ಮಾಡಿಲ್ಲ ಪೋಲಿಸರ ಕೋರಿಕೆಯ ಮೇರೆಗೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ.

<u>ಮರುವಿಚಾರಣೆಃಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

(ಶುಭಾ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.